ಟಿಪ್ಪರ್-ಲಾರಿ ಢಿಕ್ಕಿ: ಚಾಲಕ ಮೃತ್ಯು



ಹೆಬ್ರಿ, ಜೂ.18: ಟಿಪ್ಪರ್ ಹಾಗೂ ಲಾರಿಯೊಂದು ಢಿಕ್ಕಿ ಹೊಡೆದ ಪರಿಣಾಮ ಲಾರಿ ಚಾಲಕ ಮೃತಪಟ್ಟ ಘಟನೆ ನಾಡ್ಪಾಲು ಗ್ರಾಮದ ಜಕ್ಕನಮಕ್ಕಿ ತಿರುವಿನ ಬಳಿ ಶನಿವಾರ ಸಂಜೆ ನಡೆದಿರುವುದಾಗಿ ವರದಿಯಾಗಿದೆ.

ಮೃತರನ್ನು ಕೊಪ್ಪದ ಬಾಲಕೃಷ್ಣ ಜಿ. ಎಂದು ಗುರುತಿಸಲಾಗಿದೆ.

ಶಿವಪುರದಲ್ಲಿ ಜಲ್ಲಿ ಲೋಡ್ ಮಾಡಿಕೊಂಡು ಆಗುಂಬೆ ಕಡೆಗೆ ಹೋಗುತ್ತಿದ್ದ ಟಿಪ್ಪರ್, ಆಗುಂಬೆ ಕಡೆಯಿಂದ ಬರುತ್ತಿದ್ದ ಲಾರಿಗೆ ಢಿಕ್ಕಿ ಹೊಡೆಯಿತ್ತೆನ್ನಲಾಗಿದೆ.

ಘಟನೆಯಲ್ಲಿ ಗಂಭೀರ ಗಾಯಗೊಂಡ ಲಾರಿ ಚಾಲಕ ಬಾಲಕೃಷ್ಣರನ್ನು ಹೆಬ್ರಿ ಸರಕಾರಿ ಆಸ್ಪತ್ರೆಗೆ ಕರೆದೊಯ್ಯುವ ವೇಳೆ ದಾರಿ ಮಧ್ಯೆ ಮೃತಪಟ್ಟರು ಎಂದು ತಿಳಿದು ಬಂದಿದೆ. ಅಪಘಾತದಿಂದ ಟಿಪ್ಪರ್ ಹಾಗೂ ಲಾರಿ ಸಂಪೂರ್ಣ ಜಖಂ ಗೊಂಡಿದೆ.

ಈ ಬಗ್ಗೆ ಹೆಬ್ರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸ್ನೇಹಿತರ ಜೊತೆಗೂಡಿ ಪ್ರಿಯಕರನ ಕೊಲೆಗೆ ಯತ್ನಿಸಿದ ಬಾಲಕಿ: ಆರೋಪ

ನಾಲ್ವರು ಆರೋಪಿಗಳ ಬಂಧನ

ಮಂಗಳೂರು, ಜೂ.18: ಸ್ನೇಹಿತರೊಂದಿಗೆ ಸೇರಿ ಅಪ್ರಾಪ್ತ ವಯಸ್ಸಿನ ಯುವತಿಯೊಬ್ಬಳು ಪ್ರಿಯಕರನನ್ನು ಕೊಲೆಗೈಯಲು ಯತ್ನಿಸಿದ ಘಟನೆ ನಗರದ ಬಾವುಟಗುಡ್ಡೆಯಲ್ಲಿ ಶುಕ್ರವಾರ ರಾತ್ರಿ ನಡೆದಿರುವುದು ವರದಿಯಾಗಿದೆ. ಪ್ರಕರಣಕ್ಕೆ ಸಂಬಂಧಿಸಿ ನಾಲ್ವರು ಆರೋಪಿಗಳನ್ನು ಮಂಗಳೂರು ಉತ್ತರ ಠಾಣಾ ಪೊಲೀಸರು ಬಂಧಿಸಿದ್ದಾರೆ.

ಮಲ್ಲಿಕಟ್ಟೆಯ ಮುಹಮ್ಮದ್ ತುಫೈಲ್ (20), ನೀರು ಮಾರ್ಗದ ಮುಹಮ್ಮದ್ ಅಫ್ರಿದ್ (19), ನೀರು ಮಾರ್ಗದ ಮಕ್ಸೂದ್ ಸಾಗ್ (21), ಬೋಳಾರದ ಅಬ್ದುಲ್ ಸತ್ತಾರ್(19) ಬಂಧಿತ ಆರೋಪಿಗಳು.

ಹಲ್ಲೆ, ಚೂರಿ ಇರಿತಕ್ಕೊಳಗಾದ ನಿಧೀಶ್ ಎಂಬವರನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎಂದು ತಿಳಿದುಬಂದಿದೆ.

ಕಿನ್ನಿಗೋಳಿ ಏಳಿಂಜೆಯ ಅಪ್ರಾಪ್ತ ವಯಸ್ಸಿನ ಯುವತಿಗೆ ಇನ್‌ಸ್ಟಾಗ್ರಾಂ ಮೂಲಕ ನಿಧೀಶ್ ಪರಿಚಯವಾಗಿದ್ದು, ಬಳಿಕ ಇವರಿಬ್ಬರು ಪ್ರೀತಿಸುತ್ತಿದ್ದರೆನ್ನಲಾಗಿದೆ. ಆದರೆ ಇತ್ತೀಚೆಗೆ ನಿಧೀಶ್ ಬೇರೊಬ್ಬಳನ್ನು ಪ್ರೀತಿಸುತ್ತಿದ್ದಾರೆ ಎಂಬ ಸಂಶಯದಿಂದ ಆಕೆ ತನ್ನ ಸ್ನೇಹಿತರೊಂದಿಗೆ ಸೇರಿ ಈ ಕೃತ್ಯ ಎಸಗಿದ್ದಾಳೆ ಎಂದು ಪೊಲೀಸರು ತಿಳಿಸಿದ್ದಾರೆ.

ಯುವತಿಯು ನಿಧೀಶ್‌ನನ್ನು ಜೂ.16ರಂದು ರಾತ್ರಿ 9:45ರ ವೇಳೆ ಲೈಟ್ ಹೌಸ್ ಗುಡ್ಡದ ರಸ್ತೆಯಲ್ಲಿರುವ ಸೈಂಟ್ ಅಲೋಶಿಯಸ್ ಕಾಲೇಜು ಎದುರಿನ ಸಾರ್ವಜನಿಕ ಪ್ರದೇಶದಲ್ಲಿ ಭೇಟಿಯಾಗಲು ಬರುವಂತೆ ಆಹ್ವಾನಿಸಿದ್ದಾಳೆ. ಅದರಂತೆ ನಿಧೀಶ್ ತನ್ನ ಇಬ್ಬರು ಸ್ನೇಹಿತರ ಜೊತೆ ಕಾರಿನಲ್ಲಿ ಸ್ಥಳಕ್ಕೆ ಆಗಮಿಸಿದಾಗ, ಅಲ್ಲಿದ್ದ ಯುವತಿ ಮತ್ತು ಆಕೆಯ ಗೆಳೆಯರಾದ ತುಫೈಲ್, ಅಫ್ರಿದ್, ಸಾಗ್ ಮತ್ತು ಸತ್ತಾರ್ ಅವರು ನಿಧೀಶ್ ಜೊತೆ ವಾಗ್ವಾದ ನಡೆಸಿದ್ದಾರೆ. ನಿಧೀಶ್‌ನನ್ನು ಅವಾಚ್ಯವಾಗಿ ನಿಂದಿಸಿದರು ಮತ್ತು ಅವನ ಎದೆಯ ಎಡಭಾಗಕ್ಕೆ ಚೂರಿಯಿಂದ ಇರಿದು ಹಲ್ಲೆ ನಡೆಸಿರುವುದಾಗಿ ಪೊಲೀಸರಿಗೆ ದೂರು ನೀಡಲಾಗಿದೆ.

ಹಲ್ಲೆ ಆರೋಪಿಗಳ ಪೈಕಿ ತುಫೈಲ್ ಮತ್ತು ಅಫ್ರೀದ್ ಮೇಲೆ ಬೆಂಗಳೂರಿನ ಮಡಿವಾಳ ಪೊಲೀಸ್ ಠಾಣೆಯಲ್ಲಿ ಸರಕಾರಿ ನೌಕರನಿಗೆ ಕರ್ತವ್ಯಕ್ಕೆ ಅಡ್ಡಿ ಪ್ರಕರಣ, ಕೇರಳದ ಅರವೂರು ಪೊಲೀಸ್ ಠಾಣೆಯಲ್ಲಿ ಮಾದಕ ದ್ರವ್ಯ ಸಾಗಾಟ ಪ್ರಕರಣ ದಾಖಲಾಗಿತ್ತು.

ಸಾಗ್ ವಿರುದ್ಧ ಮಂಗಳೂರು ಪೂರ್ವ ಪೊಲೀಸ್ ಠಾಣೆಯಲ್ಲಿ ಪೊಕ್ಸೊ ಕಾಯ್ದೆಯಂತೆ ಪ್ರಕರಣ ದಾಖಲಾಗಿತ್ತು.

ನಿಧೀಶ್‌ನ ಸ್ನೇಹಿತ ನಿಲೇಶ್ ನೀಡಿದ ದೂರಿನಂತೆ ಮಂಗಳೂರು ಉತ್ತರ ಠಾಣಾ ಪೊಲೀಸರು ಪ್ರಕರಣ ದಾಖಲಿಸಿದ್ದರು.

40 ಅಡಿ ಆಳದ ಬಾವಿಗೆ ಬಿದ್ದ ಬೆಕ್ಕಿನ ಮರಿಯನ್ನು ರಕ್ಷಿಸಿದ ಪೇಜಾವರ ಶ್ರೀ



ಉಡುಪಿ, ಜೂ.18: ಸುಮಾರು 40 ಅಡಿ ಆಳದ ಬಾವಿಗೆ ಬಿದ್ದ ಬೆಕ್ಕಿನ ಮರಿಯೊಂದನ್ನು ಪೇಜಾವರ ಮಠದ ಶ್ರೀವಿಶ್ವಪ್ರಸನ್ನತೀರ್ಥ ಸ್ವಾಮೀಜಿ ಬಾವಿಗೆ ಇಳಿದು ರಕ್ಷಿಸಿರುವ ಘಟನೆ ರವಿವಾರ ಮುಚ್ಚಲಕೋಡು ಎಂಬಲ್ಲಿ ನಡೆದಿದೆ.

ಮುಚ್ಚಲಕೋಡು ದೇವಸ್ಥಾನಕ್ಕೆ ಆಗಮಿಸಿದ್ದ ಸ್ವಾಮೀಜಿಗೆ ಅಲ್ಲಿನ ಸಿಬ್ಬಂದಿ, ದೇವಸ್ಥಾನದ ಬಾವಿಗೆ ಬೆಕ್ಕಿನ ಮರಿ ಬಿದ್ದಿರುವ ಬಗ್ಗೆ ತಿಳಿಸಿದರು. ಕೂಡಲೇ ಕಾರ್ಯಪ್ರವೃತ್ತರಾದ ಸ್ವಾಮೀಜಿ ಬಾವಿಗೆ ಬಕೆಟ್ ಇಳಿಸಿ ಬೆಕ್ಕನ್ನು ಮೇಲಕ್ಕೆ ಎತ್ತುವ ಪ್ರಯತ್ನ ಮಾಡಿದರು. ಅದು ಸಾಧ್ಯವಾಗದಾಗ ಸ್ವತಃ ಸ್ವಾಮೀಜಿಯೇ ಸುಮಾರು ಐದಡಿ ವ್ಯಾಸದ ಬಾವಿಗೆ ಹಗ್ಗದ ಸಹಾಯದಿಂದ ಇಳಿದರು.

ನೀರಿಗೆ ಬಿದ್ದು ಸಾಕಷ್ಟು ಹೆದರಿದ್ದ ಬೆಕ್ಕಿನ ಮರಿ, ಸ್ವಾಮೀಜಿ ತೋರಿದ ಬಕೆಟ್‌ಗೆ ಹತ್ತಲು ಸಮಸ್ಯೆ ಮಾಡಿತು. ಕೊನೆಗೆ ಸ್ವಾಮೀಜಿಯೇ ತನ್ನ ಕೈಯಲ್ಲಿ ಬೆಕ್ಕಿನ ಕತ್ತು ಹಿಡಿದುಕೊಂಡು ಮೇಲಕ್ಕೆ ತಂದು ರಕ್ಷಿಸಿದರು.

ಸಂತ್ರಸ್ತ ಕುಟುಂಬಕ್ಕೆ ಪರಿಹಾರ ಸ್ವಾಗತಾರ್ಹ: ಎಸ್‌ವೈಎಸ್

ಮಂಗಳೂರು, ಜೂ.18: ಕೋಮು ದ್ವೇಷದ ಕಿಚ್ಚಿಗೆ ಬಲಿಯಾದ ಫಾಝಿಲ್, ಮಸೂದ್, ಜಲೀಲ್ ಹಾಗೂ ದೀಪಕ್ ರಾವ್ ಕುಟುಂಬಗಳಿಗೆ ರಾಜ್ಯ ಸರಕಾರ ತಲಾ 25 ಲಕ್ಷ ರೂ. ಪರಿಹಾರ ಘೋಷಣೆ ಮಾಡಿರುವುದನ್ನು ಸುನ್ನಿ ಯುವಜನ ಸಂಘ ಸ್ವಾಗತಿಸಿದೆ.

ಮೃತರ ಪೈಕಿ ಕೆಲವರ ಕುಟುಂಬಕ್ಕೆ ಮಾತ್ರ ಪರಿಹಾರ ನೀಡಿದ ತಾರತಮ್ಯದ ನಡೆಯನ್ನು ಇದೀಗ ಸರಕಾರ ಪರಿಹರಿಸಿದೆ. ಆದರೆ ಪರಿಹಾರದಿಂದ ಮಾತ್ರ ಮೃತರ ಕುಟುಂಬಗಳಿಗೆ ನ್ಯಾಯ ಒದಗಿಸಿದಂತಾಗುವುದಿಲ್ಲ. ಪ್ರಸ್ತುತ ಹತ್ಯಾ ಪ್ರಕರಣಗಳನ್ನು ಸಮಗ್ರ ತನಿಖೆಗೆ ಒಳಪಡಿಸಿ ಆರೋಪಿಗಳಿಗೆ ಅರ್ಹ ಶಿಕ್ಷೆಯಾದಾಗಲೇ ನ್ಯಾಯ ಒದಗಿಸಿದಂತಾಗುವುದು ಎಂದು ಎಸ್‌ವೈಎಸ್ ರಾಜ್ಯ ಸಮಿತಿಯ ಸಂಘಟನಾ ಕಾರ್ಯದರ್ಶಿ ಕೆ.ಎಂ.ಅಬೂಬಕರ್ ಸಿದ್ದೀಕ್ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಚಾರ್ಮಾಡಿ: ಹಲ್ಲೆ ಆರೋಪ ಬಸ್ ನಿರ್ವಾಹಕ, ವಿದ್ಯಾರ್ಥಿಗಳ ನಡುವೆ ಗಲಾಟೆ

ಬೆಳ್ತಂಗಡಿ, ಜೂ.18: ಬಸ್ ನಿರ್ವಾಹಕ ವಿದ್ಯಾರ್ಥಿಗಳನ್ನು ಬಸ್ ನೊಳಗೆ ದೂಡಿ ಹಲ್ಲೆ ನಡೆಸಿರುವುದಾಗಿ ಆರೋಪಿಸಿ ಬಸ್‌ನ್ನು ಚಾರ್ಮಾಡಿ ಬಳಿ ವಿದ್ಯಾರ್ಥಿಗಳು ಹಾಗೂ ಕೆಲವು ಸಾರ್ವಜನಿಕರು ತಡೆಹಿಡಿದು ಗಲಾಟೆ ನಡೆಸಿದ ಘಟನೆ ಶನಿವಾರ ಸಂಜೆ ನಡೆದಿರುವುದಾಗಿ ವರದಿಯಾಗಿದೆ.

ಮಂಗಳೂರಿನಿಂದ ಮೂಡಿಗೆರೆಗೆ ತೆರಳುತ್ತಿದ್ದ ಕೆಎಸ್ಆರ್‌ಟಿಸಿ ಬಸ್‌ಗೆ ಉಜಿರೆಯಲ್ಲಿ ವಿದ್ಯಾರ್ಥಿಗಳು ಹತ್ತುವ ವೇಳೆ ನಿರ್ವಾಹಕ ದೂಡಿ ಹಲ್ಲೆ ನಡೆಸಿರುವುದಾಗಿ ಆರೋಪಿಸಿರುವ ವಿದ್ಯಾರ್ಥಿಗಳು ನಿರ್ವಾಹಕನ ಜತೆ ಗಲಾಟೆ ನಡೆಸಿದ್ದಾರೆನ್ನಲಾಗಿದೆ. ಈ ಬಗ್ಗೆ ಮಾಹಿತಿ ಪಡೆದ ಚಾರ್ಮಾಡಿಯ ಸ್ಥಳೀಯರು ಬಸ್ ಚಾರ್ಮಾಡಿ ಚೆಕ್ ಪೋಸ್ಟ್‌ಗೆ ತಲುಪುವ ಸಂದರ್ಭ ಅಲ್ಲಿ ತಡೆದು ನಿಲ್ಲಿಸಿ ಗಲಾಟೆ ಆರಂಭಿಸಿದ್ದರೆನ್ನಲಾಗಿದೆ.

ಈ ಸಂದರ್ಭ ಚೆಕ್ ಪೋಸ್ಟ್‌ನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಪೊಲೀಸ್ ಸಿಬ್ಬಂದಿ ಆಗಮಿಸಿ ಪರಿಸ್ಥಿತಿ ತಿಳಿಗೊಳಿಸಲು ಯತ್ನಿಸಿರುವುದಾಗಿ ತಿಳಿದು ಬಂದಿದೆ.

ಈ ಘಟನೆಯನ್ನು ಸ್ಥಳೀಯರು ಮೊಬೈಲ್‌ನಲ್ಲಿ ಚಿತ್ರೀಕರಿಸಿದ್ದು ಅದು ಈಗ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಘಟನೆಯ ಬಗ್ಗೆ ಮಾಹಿತಿ ಪಡೆದ ಧರ್ಮಸ್ಥಳ ಪಿಎಸ್ಸೈ ಅನಿಲ್ ಕುಮಾರ್ ಮತ್ತು ತಂಡದವರು ಸ್ಥಳಕ್ಕೆ ಆಗಮಿಸಿ ಬಸ್ ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಸ್ಥಳೀಯರ ಜತೆ ಮಾತನಾಡಿ ಪರಿಸ್ಥಿತಿಯನ್ನು ಹತೋಟಿಗೆ ತಂದರು. ಬಳಿಕ ಬಸ್ ಚಾರ್ಮಾಡಿಯಿಂದ ಒಂದೂವರೆ ಗಂಟೆಯಷ್ಟು ಕಾಲ ತಡವಾಗಿ ಮೂಡಿಗೆರೆಯತ್ತ ಪ್ರಯಾಣ ಬೆಳೆಸಿರುವುದಾಗಿ ತಿಳಿದು ಬಂದಿದೆ.

ಘಟನೆಯ ಬಗ್ಗೆ ಬಸ್ ನಿರ್ವಾಹಕ ಶಿವಕುಮಾರ್ ಧರ್ಮಸ್ಥಳ ಪೊಲೀಸರಿಗೆ ದೂರು ನೀಡಿದ್ದು, ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಗಾಂಜಾ ಮಾರಾಟಕ್ಕೆ ಯತ್ನ ಮೂವರು ಆರೋಪಿಗಳ ಸೆರೆ

ಶಿರ್ವ, ಜೂ.18: ಗಾಂಜಾ ಮಾರಾಟಕ್ಕೆ ಯತ್ನಿಸುತ್ತಿದ್ದ ಆರೋಪದಲ್ಲಿ ಮೂವರನ್ನು ಶಿರ್ವ ಪೊಲೀಸರು ಶನಿವಾರ ಮಧ್ಯಾಹ್ನ ಕುರ್ಕಾಲು ಗ್ರಾಮದ ಬಗ್ಗೇಡಿಗುತ್ತು ನಾಗಬ್ರಹ್ಮಸ್ಥಾನದ ಬಳಿ ಬಂಧಿಸಿರುವುದಾಗಿ ವರದಿಯಾಗಿದೆ.

ಪ್ರೇಮನಾಥ್ ರೇವ್, ಸಂಪತ್ ಬಂಗೇರ ಮತ್ತು ಮುದಸ್ಸಿರ ಬಂಧಿತ ಆರೋಪಿಗಳು.

ಬಂಧಿತರಿಂದ 5,000 ರೂ. ಮೌಲ್ಯದ 142.92 ಗ್ರಾಂ ಮಾದಕ ವಸ್ತು ಮತ್ತು ಮೊಬೈಲ್‌ಫೋನ್‌ಗಳು, ಕಬ್ಬಿಣದ ಚೂರಿ ಹಾಗೂ ಕೃತ್ಯಕ್ಕೆ ಬಳಸಿದ 3 ಲಕ್ಷ ರೂ. ಮೌಲ್ಯದ ಕಾರು, 20 ಸಾವಿರ ರೂ. ಮೌಲ್ಯದ ಬೈಕ್‌ಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಈ ಬಗ್ಗೆ ಶಿರ್ವ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕಾಲೇಜು ಯುವತಿಯರ ಅಶ್ಲೀಲ ವೀಡಿಯೊ ವೈರಲ್ ತೀರ್ಥಹಳ್ಳಿ ಎಬಿವಿಪಿ ಅಧ್ಯಕ್ಷನ ಬಂಧನ: ಎಸ್ಪಿ

ಶಿವಮೊಗ್ಗ, ಜೂ.18: ಕಾಲೇಜು ಯುವತಿಯರ ಅಶ್ಲೀಲ ವೀಡಿಯೊ ಹರಿಬಿಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ತೀರ್ಥಹಳ್ಳಿ ಎಬಿವಿಪಿ ಅಧ್ಯಕ್ಷನನ್ನು ರವಿವಾರ ಪೊಲೀಸರು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿರುವುದಾಗಿ ವರದಿಯಾಗಿದೆ.

ತೀರ್ಥಹಳ್ಳಿ ಎಬಿವಿಪಿ ಅಧ್ಯಕ್ಷ ಪ್ರತೀಕ್ ಗೌಡ ಬಂಧಿತ ಆರೋಪಿ.

ಕಳೆದ ಎರಡು ದಿನಗಳಿಂದ ಸಾಮಾಜಿಕ ಜಾಲತಾಣ ವಾಟ್ಸ್‌ಆ್ಯಪ್‌ನಲ್ಲಿ ಅಶ್ಲೀಲ ವೀಡಿಯೊಗಳ ತುಣುಕುಗಳು ಹರಿದಾಡುತ್ತಿತ್ತು. ಆ ದೃಶ್ಯಗಳಲ್ಲಿ ಇದ್ದ ತೀರ್ಥಹಳ್ಳಿ ಎಬಿವಿಪಿ ಅಧ್ಯಕ್ಷ ಪ್ರತೀಕ್ ಗೌಡ, ಹೆಣ್ಣುಮಕ್ಕಳಿಗೆ ಆಮಿಷವೊಡ್ಡಿ ಅವರನ್ನು ಬಳಸಿಕೊಂಡು ಆ ಕೃತ್ಯಗಳ ವೀಡಿಯೊ ರೆಕಾರ್ಡ್ ಮಾಡಿ ಬ್ಲ್ಯಾಕ್ ಮೇಲ್ ಮಾಡುತ್ತಿದ್ದ ಎಂಬ ಆರೋಪ ಕೇಳಿಬಂದಿತ್ತು. ಈ ಸಂಬಂಧ ಎನ್‌ಎಸ್‌ಯುಐ ಸಂಘಟನೆ ತೀರ್ಥಹಳ್ಳಿ ಡಿವೈಎಸ್ಪಿಗೆ ಮನವಿಯನ್ನೂ ಸಲ್ಲಿಸಿತ್ತು. ಅಲ್ಲದೇ ಆರೋಪಿಯ ವಿರುದ್ಧ ಸುಮೋಟೊ ಪ್ರಕರಣ ದಾಖಲಿಸುವಂತೆ 'ನೈಜ ಹೋರಾಟ ಗಾರರ ವೇದಿಕೆ' ಶಿವಮೊಗ್ಗ ಎಸ್ಪಿಗೆ ಮನವಿ ಸಲ್ಲಿಸಿತ್ತು.

ಇದರ ಬೆನ್ನಲ್ಲೇ ಇದೀಗ ಶಿವಮೊಗ್ಗ ಪೊಲೀಸರು ಆರೋಪಿಯನ್ನು ಬಂಧಿಸಿದ್ದು, ಆತನನ್ನು ಕೋರ್ಟ್‌ಗೆ ಹಾಜರುಪಡಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಎಸ್ಪಿ ಮಿಥುನ್ ಕುಮಾರ್ ಅಧಿಕೃತ ಮಾಹಿತಿ ನೀಡಿದ್ದಾರೆ.

ಜಾನುವಾರು ಅಕ್ರಮ ಸಾಗಾಟ ಇಬ್ಬರು ಆರೋಪಿಗಳ ಸೆರೆ

ಸುಳ್ಯ, ಜೂ.18: ಅಕ್ರಮವಾಗಿ ಜಾನುವಾರು ಸಾಗಾಟ ಮಾಡಿರುವುದಾಗಿ ಆರೋಪಿಸಿ ಇಬ್ಬರನ್ನು ಬೆಳ್ಳಾರೆ ಪೊಲೀಸರು ಬಂಧಿಸಿ, ಜಾನುವಾರು ಹಾಗೂ ವಾಹನವನ್ನು ವಶಪಡಿಸಿಕೊಂಡ ಘಟನೆ ಕೊಡಿಯಾಲ ಗ್ರಾಮದ ಮುವಪ್ಪೆ ಎಂಬಲ್ಲಿ ರವಿವಾರ ರಾತ್ರಿ ನಡೆದಿರುವುದಾಗಿ ವರದಿಯಾಗಿದೆ.

ಇಸುಬು, ಹುಸೈನ್ ಬಂಧಿತ ಆರೋಪಿಗಳು. ಇನ್ನಿಬ್ಬರು ಆರೋಪಿಗಳಾದ ಕೃಷ್ಣಪ್ಪ ಬಂಬಿಲ ಮತ್ತು ಅಲಿ ಕೋನಡ್ಕ ಪರಾರಿಯಾಗಿದ್ದಾರೆನ್ನಲಾಗಿದೆ.

ಈ ಬಗ್ಗೆ ಬೆಳ್ಳಾರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.ಕಾರ್ಯಾಚರಣೆಯಲ್ಲಿ ಬೆಳ್ಳಾರೆ ಪಿಎಸ್ಸೈ ಸುಹಾಸ್ ಹಾಗೂ ಸಿಬ್ಬಂದಿ ಶ್ರೀಶೈಲ, ಮಂಜುನಾಥ್, ಸುಭಾಷ್ ಕಿತ್ತೂರ್, ಬಸವರಾಜ್ ಭಾಗವಹಿಸಿದ್ದರು.

ಕಾರು-ಬೈಕ್ ಢಿಕ್ಕಿ ಸವಾರ ಗಂಭೀರ

ಬೆಳ್ತಂಗಡಿ, ಜೂ.18: ಕಾರು- ಬೈಕ್ ನಡುವೆ ಸಂಭವಿಸಿದ ಅಪಘಾತದಲ್ಲಿ ಬೈಕ್ ಸವಾರ ಗಂಭೀರ ಗಾಯಗೊಂಡ ಘಟನೆ ಧರ್ಮಸ್ಥಳ ಹೈಸ್ಕೂಲ್ ಸಮೀಪ ನಡೆದಿರುವುದಾಗಿ ವರದಿಯಾಗಿದೆ.

ಬೈಕ್ ಸವಾರ ಪಟ್ರಮೆ ಗ್ರಾಮದ ನಿವಾಸಿ ಶಿವರಾಂ (40) ಗಾಯಗೊಂಡವರು. ಕಾರು ಬೆಂಗಳೂರಿನ ಹೇಮಂತ್ ಎಂಬವರಿಗೆ ಸೇರಿದ್ದಾಗಿದ್ದು ಧರ್ಮಸ್ಥಳಕ್ಕೆ ಯಾತ್ರಾರ್ಥಿಯಾಗಿ ಬಂದಿದ್ದರೆನ್ನಲಾಗಿದೆ.

ಈ ಬಗ್ಗೆ ಬೆಳ್ತಂಗಡಿ ಸಂಚಾರಿ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ

ನಿಧನ

ಪ್ರಶಾಂತ್ ಭಟ್

ಬೆಳ್ತಂಗಡಿ, ಜೂ.18: ನಗರದ ಪ್ರಭಾತ್ ಸ್ಟೋರ್ಸ್‌ನ ಪ್ರಶಾಂತ್ ಭಟ್(56)ಎಂಬವರು ರವಿವಾರ ಮಂಗಳೂರಲ್ಲಿ ಹೃದಯಾಘಾತದಿಂದ ನಿಧನರಾದರು.

ಮೃತರು ತಂದೆ, ಪತ್ನಿ, ಪುತ್ರನನ್ನು ಅಗಲಿದ್ದಾರೆ.

ಉದ್ಯಮಿ ಲೋಕೇಶ್ ಶೆಟ್ಟಿ

ಮೂಡುಬಿದಿರೆ, ಜೂ.18: ಮುಂಬೈ ಬಾಂದ್ರಾ ವೆಸ್ಟ್‌ನ ಪಾಲಿ ಹಿಲ್‌ನ ಜನತಾ ಬಾರ್ ಆ್ಯಂಡ್ ರೆಸ್ಟೋರೆಂಟ್ ಮಾಲಕ, ಮೂಡುಬಿದಿರೆ ಕಡಂದಲೆ ಪರಾರಿ ಮನೆತನದ ಲೋಕೇಶ್ ಶೆಟ್ಟಿ (67) ಶನಿವಾರ ನಿಧನರಾಗಿದ್ದಾರೆ.

ಮೃತರು ಪತ್ನಿ, ಪುತ್ರಿಯನ್ನು ಅಗಲಿದ್ದಾರೆ.

ಜೂ.22: ಮೆಸ್ಕಾಂ ಜನ ಸಂಪರ್ಕ ಸಭೆ

ಕಡಬ, ಜೂ.18: ಮೆಸ್ಕಾಂ ಕಡಬ ಉಪವಿಭಾಗ ಕಚೇರಿಯಲ್ಲಿ ಜೂ.22ರಂದು ಪೂರ್ವಾಹ್ನ 11ರಿಂದ 12ಗಂಟೆಯವರೆಗೆ ಜನ ಸಂಪರ್ಕ ಸಭೆ ನಡೆಯಲ್ಲಿದ್ದು, ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲ್ಲಿದ್ದಾರೆ.

ಈ ಸಭೆಯಲ್ಲಿ ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ, ಈ ಅವಕಾಶವನ್ನು ಗ್ರಾಹಕರು ಸದುಪಯೋಗಿಸಿಕೊಳ್ಳಲು ಕೋರಲಾಗಿದೆ. ದೂರವಾಣಿ ಕರೆಯ ಮುಖಾಂತರವೂ ಸಂಪರ್ಕಿಸಿ, ಅಹವಾಲುಗಳನ್ನು ಸಲ್ಲಿಸಬಹುದಾಗಿದೆ.

ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ: 08251-200159

ADMISSION OPEN
Cabin Crew & Airport Ground Staff courses.
100% placement Assistance.
Contact:
Indian Aviation Academy
Mangalore
Mob: 7848820414

ದ.ಕ. ಜಿಲ್ಲಾ ರಖಂ ಮೊಟ್ಟೆ ವರ್ತಕರ ಸಂಘ (ರಿ.)
ಮೊ.ಸಂ. 7406630999
ಮೊಟ್ಟೆ ದರ 100ಕ್ಕೆ
ಲೈನ್ ಸೇಲ್ಸ್ ದರ: 630
ಸೊಸೈಟಿ ದರ: 610
ADVT

In the name of ALLAH .....
ಯಶಸ್ವಿಯಾಗಿ 29ನೇ ವರ್ಷಕ್ಕೆ ಪಾದಾರ್ಪಣೆ
NATIONAL TUTORIALS
Pioneer Complex, STATE BANK, Mangaluru
ADMISSION OPEN ದಾಖಲಾತಿ ಪ್ರಾರಂಭವಾಗಿದೆ
7ನೇ, 8ನೇ, 9ನೇ ಕ್ಲಾಸ್‌ದವರು ನೇರವಾಗಿ
DIRECT SSLC ಪಾಸಾಗಿರಿ
(ENGLISH MEDIUM / KANNADA MEDIUM)
I PUC ಫೇಲಾದವರು / SSLC ಪಾಸಾದವರು
DIRECT II PUC ಪಾಸಾಗಿರಿ
ಹುಡುಗಿಯರ ವಿಧ್ಯಾಭ್ಯಾಸಕ್ಕೆ ಪ್ರೋತ್ಸಾಹ 50% ಶುಲ್ಕ ರಿಯಾಯಿತಿ..!
ಇಂದೇ ಸೇರಿರಿ ಯಶಸ್ಸು ಖಚಿತ
Ph. 0824-4275573 / 8197385573

ಕುರ್‌ಆನ್ ವಚನಗಳು
ಅವರು ಕಡಿಮೆ ನಗಬೇಕು ಮತ್ತು ಹೆಚ್ಚು ಅಳಬೇಕು. ಹಾಗಿದೆ, ಅವರ ಗಳಿಕೆಯ ಫಲ.
(9:82)
ADVT

ಉಡುಪಿ: 10 ಲಕ್ಷ ರೂ. ಮೌಲ್ಯದ ನೋಟ್ ಪುಸ್ತಕ, ಸಮವಸ್ತ್ರ ವಿತರಣೆ

ಉಡುಪಿ, ಜೂ.18: ಬಡಗಬೆಟ್ಟು ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿ ವತಿಯಿಂದ ಉಡುಪಿ ಜಿಲ್ಲೆಯ 25 ಕನ್ನಡ ಮಾಧ್ಯಮ ಶಾಲೆಗಳ ವಿದ್ಯಾರ್ಥಿಗಳಿಗೆ ಸುಮಾರು 10 ಲಕ್ಷ ರೂ. ಮೌಲ್ಯದ ನೋಟ್ ಪುಸ್ತಕ, ಸಮವಸ್ತ್ರ ಹಾಗೂ ಆರ್ಥಿಕ ನೆರವು ವಿತರಣೆ ಕಾರ್ಯಕ್ರಮವನ್ನು ಉಡುಪಿ ಪುರಭವನದಲ್ಲಿ ಶನಿವಾರ ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಉಡುಪಿ ಶಾಸಕ